ಕರ್ನಾಟಕ ಸರ್ಕಾರ
(ಪಿ.ಆರ್.ಪಿ.67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ.ಸಂಖ್ಯೆ 57)<br>ನಮೂನೆ ಸಂಖ್ಯೆ 4 |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸ್ಪೆಷಲ್ ಕೇಸ್ ನಂಬರ್ : 92/2011**

**ಪ್ರಾಸಾ- 56 ಚಾಸಾ- 78**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಮಧುಸೂದನ್ |
| ತಂದೆಯ ಹೆಸರುಃ | : | ನಂಜೇಗೌಡ |
| ವಯಸ್ಸುಃ | : | 55 ವರ್ಷ |
| ಉದ್ಯೋಗಃ | : | ಗುತ್ತಿಗೆದಾರರು |
| ವಾಸ | : | ಚನ್ನರಾಯಪಟ್ಟಣ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ: 26-06-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ವಿಶೇಷ ಅಭಿಯೋಜಕರಿಂದಃ**

ನಾನು ಕಳೆದ 38 ವರ್ಷಗಳಿಂದ ಚನ್ನರಾಯಪಟ್ಟಣದಲ್ಲಿ ಗುತ್ತಿಗೆದಾರನಾಗಿ ಕೆಲಸ ಮಾಡುತ್ತಿದ್ದೇನೆ. ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯವಿದೆ. ಆರೋಪಿತರು ಕೆ.ಎಸ್.ಆರ್.ಟಿ.ಸಿ. ಬಸ್ ನಿರ್ವಾಹಕರಾಗಿದ್ದರು. ಅವರು ಬೇರೆ ಯಾವುದೇ ವ್ಯವಹಾರ ಮಾಡುತ್ತಿರಲಿಲ್ಲ, ನಾನು ಆರೋಪಿತರಿಂದ ಯಾವುದೇ ಸಾಲವನ್ನು ಪಡೆದುಕೊಂಡಿಲ್ಲ. ಅವರ ಭಾವ ಧನಲಕ್ಷ್ಮೀ ಫೈನಾನ್ಸ್ ನಡೆಸುತ್ತಿದ್ದರು. ಅಲ್ಲಿ ನಾನು 1 ಲಕ್ಷ ರೂಪಾಯಿಗೆ ಚೀಟಿ ಹಾಕಿದ್ದೆನು. ಸದರಿ ಫೈನಾನ್ಸ್ನ ನಡೆಸುತ್ತಿದ್ದ ಬಾಲಸುಬ್ರಹ್ಮಣ್ಯಗೌಡರವರು ನನಗೆ ಆ ಹಣವನ್ನು ಕೊಟ್ಟಿದ್ದರು.

(ಈ ಹಂತದಲ್ಲಿ ಮಾನ್ಯ ವಿಶೇಷ ಅಭಿಯೋಜಕರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ದಾಖಲೆಗೆ ವ್ಯತಿರಿಕ್ತವಾಗಿ ಸಾಕ್ಷ್ಯನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ವಿಶೇಷ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು **ಭಾಗಶಃ** ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ವಿಶೇಷ ಅಭಿಯೋಜಕರಿಂದಃ**

ನಾನು 2005ರಲ್ಲಿ ಆರೋಪಿತರಿಂದ 1ಲಕ್ಷ ರೂಪಾಯಿ ಹಣವನ್ನು ಸಾಲ ಪಡೆದಿದ್ದು ಅದನ್ನು ನಾನು ನಗದಾಗಿ ಕೊಟ್ಟು ತೀರಿಸಿರುತ್ತೇನೆ ಎಂದರೆ ಸರಿಯಲ್ಲ. ಅದೇ ರೀತಿ ನಾನು ಹಲವಾರು ಬಾರಿ

ಅವರಿಂದ ಸಾಲ ಪಡೆದು ವಾಪಸ್ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರವಾಗಿ ನಾನು ಈಗ ನನಗೆ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಓದಿ ಹೇಳಿದ ಸದರಿ ಹೇಳಿಕೆಯ ಭಾಗವನ್ನು ನಿಪಿ-96 ಎಂದು ಗುರುತಿಸಲಾಯಿತು. ಆರೋಪಿತರಿಂದ ಸಾಲ ಪಡೆದಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿದಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ಶ್ರೀ ಬಿ ಜೆ ಪಿ ಎಸ್ ವಕೀಲರಿಂದಃ**

ಇಲ್ಲವೆಂದು ಹೇಳುತ್ತಾರೆ

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್**

**ನ್ಯಾಯಾಧೀಶರು, ಹಾಸನ.**